ಸಿಸಿ ನಂ. 225/2022 ಪಿಡಬ್ಲೂ :1

ದಿನಾಂಕಃ 26-09-2023 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ** ಅವರ **ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತದೆ.

2. ಫಿರ್ಯಾದುದಾರ ಸಂಸ್ಥೆಯ ಆಡಳಿತ ಮಂಡಳಿ ಸಭೆಯ ಠರಾವಿನ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ –1 ಎಂದು , ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ –2 ಎಂದು ಗುರುತಿಸಲಾಯಿತು . ನಿಪಿ-2 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ –2 ಎ ಎಂದು ಗುರುತಿಸಲಾಯಿತು. ಬ್ಯಾಂಕನವರು ಕೊಟ್ಟಿರುವ ಮೆಮೊವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ –3 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-4 ಎಂದು, ಅಂಚೆ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು. ಸದರಿ ನೋಟಿಸನ್ನು ಆರೋಪಿಯು ಸ್ವೀಕರಿಸದ ಕಾರಣ ಅದನ್ನು ಅಂಚೆ ಲಕೋಟೆ ಸಮೇತವಾಗಿ ಹಾಜರು ಪಡಿಸಿರುತ್ತೇನೆ . ಸದರಿ ಅಂಚೆ ಲಕೋಟೆಯನ್ನು ನಿಪಿ –6 ಎಂದು ಹಾಗೂ ಅದರ ಒಳಗೆ ಇದ್ದ ನೋಟಿಸನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

3. ಸಾಲದ ಅರ್ಜಿಯ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಸಾಲದ ಅರ್ಜಿಯ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಅರ್ಜಿಯ ಯಥಾ

ನಕಲನ್ನು ನಿಪಿ-7 ಎಂದು ಗುರುತಿಸಲಾಯಿತು . ಸಾಲದ ಕರಾರು ಪತ್ರದ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಸಾಲದ ಕರಾರು ಪತ್ರದ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಕರಾರು ಪತ್ರದ ಯಥಾ ನಕಲನ್ನು ನಿಪಿ -8 ಎಂದು ಗುರುತಿಸಲಾಯಿತು . ಡಿಮಾಂಡ್ ಪ್ರಾಮಿಸರಿ ನೋಟಿನ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಡಿಮಾಂಡ್ ಪ್ರಾಮಿಸರಿ ನೋಟಿನ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಡಿಮಾಂಡ್ ಪ್ರಾಮಿಸರಿ ನೋಟಿನ ಯಥಾ ನಕಲನ್ನು ನಿಪಿ -9 ಎಂದು ಗುರುತಿಸಲಾಯಿತು . ಮೂರು ಭದ್ರತಾ ಪತ್ರದ ಯಥಾ ನಕಲುಗಳನ್ನು ಹಾಜರು ಪಡಿಸಿರುತ್ತೇನೆ . ಸದರಿ ಭದ್ರತಾ ಪತ್ರದ ಮೂಲ ಪ್ರತಿಗಳನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಭದ್ರತಾ ಪತ್ರಗಳ ಯಥಾ ನಕಲುಗಳನ್ನು ಕ್ರಮವಾಗಿ ನಿಪಿ -10 ರಿಂದ ನಿಪಿ-12 ಎಂದು ಗುರುತಿಸಲಾಯಿತು .

( ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.